**All India Radio: Bangalore**
**Regional Bulletin In Kannada**
**09.07.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**09.07.2025 / 6.40 p.m.**
**<><><><>**

ಮುಖ್ಯಾಂಶಗಳು

1. ರಾಜ್ಯದಲ್ಲಿ ರಕ್ಷಣಾ ಕಾರಿಡಾರ್ ಗೆ ಅನುಮತಿ ನೀಡುವಂತೆ ಕೇಂದ್ರ ಸಚಿವ ರಾಜನಾಥ ಸಿಂಗ್ ಗೆ ಮುಖ್ಯಮಂತ್ರಿ ಮನವಿ
2. ಬೆಂಗಳೂರಿನಲ್ಲಿ ಸುರಂಗ ರಸ್ತೆ ಕುರಿತಂತೆ ಇನ್ನೆರಡು ದಿನಗಳಲ್ಲಿ ಜಾಗತಿಕ ಟೆಂಡರ್ ಕರೆಯಲು ಸರ್ಕಾರ ನಿರ್ಧಾರ
3. ಬಾಹ್ಯಾಕಾಶದಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯದ ಹೆಸರುಕಾಳು, ಮೆಂತ್ಯ ಮೊಳಕೆಯೊಡೆಯುವ ಪ್ರಯೋಗ ಪ್ರಗತಿಯಲ್ಲಿ - ನಾಸಾ ಸ್ಪಷ್ಟನೆ
4. ಸುಳ್ಳು ಸುದ್ದಿ ಹರಡುವವರ ವಿರುದ್ಧ ಸೂಕ್ತ ಕಾನೂನು ಕ್ರಮ - ಗೃಹಸಚಿವ ಡಾ.ಜಿ.ಪರಮೇಶ್ವರ್
5. ಮೂವರು ಶಂಕಿತ ಭಯೋತ್ಪಾದಕರು ಇದೇ ೧೪ ರವರೆಗೆ ಎನ್ಐಎ ಕಸ್ಟಡಿಗೆ

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ನವದೆಹಲಿಯಲ್ಲಿ ಇಂದು ರಕ್ಷಣಾ ಸಚಿವ ರಾಜನಾಥಸಿಂಗ್ ಅವರನ್ನು ಭೇಟಿಯಾಗಿ ಮೈಸೂರು ದಸರಾ ಉತ್ಸವದಲ್ಲಿ ವೈಮಾನಿಕ ಪ್ರದರ್ಶನ ಆಯೋಜಿಸುವ ಕುರಿತು ಚರ್ಚೆ ನಡೆಸಿದರು. ಕರ್ನಾಟಕದಲ್ಲಿ ಡಿಫೆನ್ಸ್ ಕಾರಿಡಾರ್, ಅಭಿವೃದ್ಧಿ ಕಾಮಗಾರಿಗಳಿಗೆ ರಕ್ಷಣಾ ಇಲಾಖೆಯ ಜಾಗ ನೀಡುವ ಕುರಿತು ಸಮಾಲೋಚನೆ ನಡೆಸಿದರು.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ (೩೦ ಸೆಕೆಂಡುಗಳು)**

ಇದೇ ವೇಳೆ ಸಾಧ್ಯವಾದರೆ ನಾಳೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡುವುದಾಗಿ ತಿಳಿಸಿದ್ದಾರೆ. ರಕ್ಷಣಾ ಸಚಿವರ ಭೇಟಿ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಕೆ.ಜೆ. ಜಾರ್ಜ್, ಬೈರತಿ ಸುರೇಶ್, ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಹಾಜರಿದ್ದರು.

<><><><>

ಬೆಂಗಳೂರಿನಲ್ಲಿ ಟನಲ್ ರಸ್ತೆ ಕುರಿತಂತೆ ಇನ್ನೆರಡು ದಿನಗಳಲ್ಲಿ ಜಾಗತಿಕ ಟೆಂಡರ್ ಕರೆಯಲಾಗುವುದು ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, “ರಾಜ್ಯದ ಆರು ನೀರಾವರಿ ಯೋಜನೆಗಳಿಗೆ ಒಟ್ಟು ೧೧ ಕೋಟಿ ೧೨೨ ಲಕ್ಷ ಅನುದಾನಕ್ಕಾಗಿ ಮನವಿ ಸಲ್ಲಿಸಲಾಗಿದೆ ಎಂದು ಹೇಳಿದ್ದಾರೆ. “ಆರು ನೀರಾವರಿ ಯೋಜನೆಗಳಾದ ಸೊನ್ನತಿ ಏತ ನೀರಾವರಿ ಯೋಜನೆಗೆ ೮೦೪ ಕೋಟಿ ೬೬ ಲಕ್ಷ ಯುಕೆಪಿಯ ಇಂಡಿ ಶಾಖಾ ಕಾಲುವೆಗೆ ೨ಸಾವಿರದ ೬೬೬ ಕೋಟಿ, ಮಲಪ್ರಭಾ ಕಾಲುವೆ ಮೂರನೇ ಹಂತಕ್ಕೆ ೩ ಸಾವಿರ ಕೋಟಿ, ಘಟಪ್ರಭಾ ಬಲದಂಡೆ ಕಾಲುವೆ ಮತ್ತು ಚಿಕ್ಕೋಡಿ ಶಾಖಾ ನಾಲೆಗೆ ೧

ಸಾವಿರದ ೪೪೪.೪೨ ಕೋಟಿ, ಬೆಣ್ಣೆಹಳ್ಳದ ಪ್ರವಾಹ ನಿಯಂತ್ರಣ ಹಾಗೂ ನಿರ್ವಹಣೆಗಾಗಿ ೧ ಸಾವಿರದ ೮೧೦ ಕೋಟಿ ಸೇರಿದಂತೆ ಒಟ್ಟು ೧೧ ಸಾವಿರದ ೧೨೨.೭೮ ಕೋಟಿ ಅನುದಾನಕ್ಕಾಗಿ ಮನವಿ ಸಲ್ಲಿಸಲಾಗಿದೆ. "ಎತ್ತಿನಹೊಳೆ ಯೋಜನೆಯನ್ನು ಕುಡಿಯುವ ನೀರಿನ ಉದ್ದೇಶಕ್ಕೆ ಎಂದು ಅನುಮೋದಿಸಿ ಶೇಕಡ ೨೫ ರಷ್ಟು ಆರ್ಥಿಕ ಸಹಾಯ ನೀಡಬೇಕಾಗಿ ಮನವಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ. ಗೋವಾ ರಾಜ್ಯ  ನಮ್ಮ ಭಾಗದಲ್ಲಿ ವಿದ್ಯುತ್ ಮಾರ್ಗ ಹಾಕಲು ತಕರಾರು ತೆಗೆದಿದ್ದು ನಮಗೆ ಸಹಕಾರ ನೀಡಿದರೆ ಗೋವಾದವರಿಗೂ ಸಹಕಾರ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಬಾಹ್ಯಕಾಶದಲ್ಲಿ ಧಾರವಾಡದ ಕೃಷಿ ವಿಶ್ವವಿದ್ಯಾಲಯದ ಹೆಸರುಕಾಳು ಹಾಗೂ ಮೆಂತ್ಯ ಕಾಳುಗಳ ಮೊಳಕೆಯೊಡೆಯುವ ಪ್ರಯೋಗಗಳನ್ನು ನಡೆಸಲಾಗುತ್ತಿದೆ  ಎಂದು ನಾಸಾ ತಿಳಿಸಿದೆ. ಆಕ್ಸಿಯಮ್ ಸ್ಪೇಸ್ ಮಿಷನ್ ೪ ರ ಭಾಗವಾಗಿ ಪ್ರಸ್ತುತ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿರುವ ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ, ಕಕ್ಷೆಯ ಪ್ರಯೋಗಾಲಯದಲ್ಲಿ ಹೆಸರುಕಾಳು ಮತ್ತು ಮೆಂತ್ಯ ಬೀಜಗಳ ಪ್ರಯೋಗ ನಡೆಸುತ್ತಿದ್ದಾರೆ. ಇಸ್ರೋ, ಜೈವಿಕ ತಂತ್ರಜ್ಞಾನ ಇಲಾಖೆ ಮತ್ತು ನಾಸಾ ನಡುವಿನ ಸಹಯೋಗದಡಿಯಲ್ಲಿ ಅಭಿವೃದ್ಧಿ ಪಡಿಸಲಾದ ಹಲವಾರು ಪ್ರಯೋಗಗಳನ್ನು ಕೈಗೊಳ್ಳುತ್ತಿದ್ದಾರೆ. ಬಾಹ್ಯಾಕಾಶದಲ್ಲಿ ಮೊಳಕೆಯೊಡೆಯುವ ಸಲಾಡ್ ಸೀಡ್ಸ್ ಎಂಬ ಪ್ರಯೋಗವು ಸಸ್ಯ ಆಧಾರಿತ ಆಹಾರ ಉತ್ಪಾದನಾ ವ್ಯವಸ್ಥೆಗಳು ಮಾನವ ಬಾಹ್ಯಕಾಶ ಪರಿಶೋಧನೆಯ ದೀರ್ಘಕಾಲೀನ ಗುರಿಗಳನ್ನು ಸಾಧಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸಲಿದೆ.

<><><><>

ಸುಳ್ಳು ಸುದ್ದಿ ಹರಡುವವರು ಮತ್ತು ಪ್ರಚೋದನಾಕಾರಿ ಭಾಷಣ ಮಾಡುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಮುಂದಿನ ಅಧಿವೇಶನದಲ್ಲಿ ಚರ್ಚಿಸಲಾಗುವುದು ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿ ನಡೆದ ಶಾಂತಿ ಸಭೆಯಲ್ಲಿ ಮಾತನಾಡಿದ ಅವರು, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶಾಂತಿ ಸೌಹಾರ್ದತೆ ನೆಲೆಸುವಲ್ಲಿ ಜನಪ್ರತಿನಿಧಿಗಳು, ಧಾರ್ಮಿಕ ಪ್ರಮುಖರು ಸೇರಿದಂತೆ ಪ್ರತಿಯೊಬ್ಬರೂ ಸಹಕರಿಸಬೇಕು. ಶಾಂತಿ ಕದಡುವವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಕೈಗೊಳ್ಳುವಂತೆ ಪೊಲೀಸ್ ಇಲಾಖೆಗೆ ನಿರ್ದೇಶನ ನೀಡಲಾಗಿದೆ ಎಂದು ಹೇಳಿದ್ದಾರೆ. ದಕ್ಷಿಣ ಕನ್ನಡದ ಡ್ರಗ್ಸ್ ಮಾಫಿಯಾದ ವಿರುದ್ಧವೂ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಜನೌಷಧಿ ಕೇಂದ್ರಗಳ ಸ್ಥಗಿತ ಕುರಿತು ಹೈಕೋರ್ಟ್ ನೀಡಿದ ಮಧ್ಯಂತರ ತಡೆ ಆದೇಶವನ್ನು ಸ್ವಾಗತಿಸುವುದಾಗಿ ಪ್ರತಿಪಕ್ಷ ನಾಯಕ ಆರ್.ಅಶೋಕ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಖಾಸಗಿ ಮೆಡಿಕಲ್ ಫಾರ್ಮಾಗಳಿಗೆ ಅನುಕೂಲ ಮಾಡಿಕೊಡಲು ಸರ್ಕಾರ ಜನೌಷಧಿ ಕೇಂದ್ರಗಳನ್ನು ಮುಚ್ಚಿತ್ತು. ಖಾಸಗಿ ಲಾಬಿಗೆ ಮಣಿದ ಸರ್ಕಾರಕ್ಕೆ ಹಿನ್ನಡೆಯಾಗಿದೆ ಎಂದು ಹೇಳಿದ್ದಾರೆ. ಜೈಲಿನಲ್ಲೇ ಭಯೋತ್ಪಾದಕರಿಗೆ ಅನುಕೂಲ ಮಾಡಿಕೊಡಲಾಗುತ್ತಿದ್ದು. ಗೃಹ ಇಲಾಖೆ ಇದೆಯಾ ಎಂದು ಪ್ರಶ್ನಿಸಿದ್ದಾರೆ. ಎಲ್ಲ ಬಾಕಿ ಬಿಲ್ ಇಟ್ಟುಕೊಂಡು ಗ್ಯಾರಂಟಿ ಕೊಟ್ಟರೆ ಪ್ರಯೋಜನವಿಲ್ಲ, ಉಚಿತ ಬಸ್ ನೀಡಿದ್ದರೂ, ಶಾಲಾ ಮಕ್ಕಳು ನಡೆದುಕೊಂಡು ಹೋಗಬೇಕಾಗಿದೆ ಎಂದು ಅಭಿಪ್ರಾಯ ಪಟ್ಟಿದ್ದಾರೆ.

<><><>

ಗ್ರಾಮೀಣ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಲು ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಆಧುನಿಕ ಮೂಲಭೂತ ಸೌಕರ್ಯಗಳನ್ನು ಒಳಗೊಂಡ ಒಂದು ಮಾದರಿ ಶಾಲೆ ನಿರ್ಮಿಸಲಾಗುವುದು ಎಂದು ಆಹಾರ ನಾಗರಿಕ ಸರಬರಾಜು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್ ಮುನಿಯಪ್ಪ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿಶ್ವನಾಥಪುರದ ಕರ್ನಾಟಕ ಪಬ್ಲಿಕ್ ಶಾಲೆ ಆವರಣದಲ್ಲಿ ಸಿ.ಎಸ್.ಆರ್ ಅನುದಾನದಡಿ ನಿರ್ಮಿಸಿರುವ ಸರ್.ಎಂ ವಿಶ್ವೇಶ್ವರಯ್ಯ ಸಭಾಂಗಣದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಪ್ರತಿಯೊಂದು ಗ್ರಾಮ ಪಂಚಾಯಿತಿಯಲ್ಲಿ ಕರ್ನಾಟಕ ಪಬ್ಲಿಕ್ ಶಾಲೆ ನಿರ್ಮಾಣ ಮಾಡುವುದು ಸರ್ಕಾರದ ಆಶಯ ಎಂದು ಹೇಳಿದ್ದಾರೆ.

<><><>

ಬೆಂಗಳೂರು ಹಾಗೂ ಕೋಲಾರದಲ್ಲಿ ಎನ್ಐಎ ಅಧಿಕಾರಿಗಳು ಬಂಧಿಸಿರುವ ಮೂವರು ಆರೋಪಿಗಳನ್ನು ಬೆಂಗಳೂರಿನ ವಿಶೇಷ ಎನ್ಐಎ ನ್ಯಾಯಾಲಯವು ಆರು ದಿನಗಳ ಕಾಲ ರಾಷ್ಟ್ರೀಯ ತನಿಖಾ ಸಂಸ್ಥೆಯ ಕಸ್ಟಡಿಗೆ ಹಸ್ತಾಂತರಿಸಿದೆ. ಡಿವೈಎಸ್ ಪಿ ಸುಶೀಲ ನೇತೃತ್ವದ ತಂಡ ಆರೋಪಿಗಳಾದ ಅನೀಸ್ ಫಾತೀಮಾ, ಚಾನ್ ಪಾಷಾ ಮತ್ತು ಡಾ.ನಾಗರಾಜ್ ಎಸ್ ಅವರನ್ನು ಇಂದು ನ್ಯಾಯಾಲಯದ ಮುಂದೆ ಹಾಜರು ಪಡಿಸಿತ್ತು. ನ್ಯಾಯಾಧೀಶರು ಜುಲೈ ೧೪ರವರೆಗೆ ಎನ್ಐಎ ಕಸ್ಟಡಿಗೆ ಹಸ್ತಾಂತರಿಸಿ ಆದೇಶ ಹೊರಡಿಸಿದ್ದಾರೆ. ಬೆಂಗಳೂರಿನ ಪರಪ್ಪನ ಅಗ್ರಹಾರದ ಕೇಂದ್ರ ಕಾರಾಗೃಹದಲ್ಲಿ ಮನೋವೈದ್ಯರಾಗಿರುವ ೧೨ನೇ ಆರೋಪಿ ಡಾ. ನಾಗರಾಜ್, ಒಂದನೇ ಆರೋಪಿ ಟಿ. ನಸೀರ್‌ಗೆ ಮೊಬೈಲ್ ಫೋನ್‌ಗಳನ್ನು ಕಳ್ಳಸಾಗಣೆ ಮಾಡಲು ಸಹಾಯ ಮಾಡಿದ್ದರು. ಇದನ್ನು ಇತರ ಶಂಕಿತರು ಎಲ್‌ಇಟಿಯ ಚಟುವಟಿಕೆಗಳಿಗೆ ಸಹಾಯ ಮಾಡಲು ಬಳಸುತ್ತಿದ್ದರು ಎನ್ನಲಾಗಿದೆ.

<><><>

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಕಾರ್ಮಿಕ ವಿರೋಧಿ ಹಾಗೂ ಕಾರ್ಪೋರೇಟ್ ಪರ ನೀತಿಗಳ ವಿರುದ್ಧ ಇಂದು ಅಖಿಲ ಭಾರತ ಮುಷ್ಕರದ ಅಂಗವಾಗಿ ಬಳ್ಳಾರಿಯಲ್ಲಿ ಗಾಂಧಿ ಭವನದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿಯಿಂದ ಬೃಹತ್ ಮೆರವಣಿಗೆ ನಡೆಯಿತು. ನಂತರ ಜಿಲ್ಲಾಧಿಕಾರಿ ಕಚೇರಿ ಮುಂದೆ ಪ್ರತಿಭಟನಾ ಧರಣಿ ನಡೆಸಲಾಯಿತು. ಕೇಂದ್ರ ಸರ್ಕಾರ ಜಾರಿ ಮಾಡಲು ಹೊರಟಿರುವ ನಾಲ್ಕು ಕಾರ್ಮಿಕ ಕಾನೂನುಗಳನ್ನು ಕೈಬಿಡಬೇಕು ಎಂದು ಆಗ್ರಹಿಸಿ ಹತ್ತಕ್ಕೂ ಹೆಚ್ಚು ಕಾರ್ಮಿಕ ಸಂಘಟನೆಗಳು ಇಂದು ನೀಡಿದ್ದ ಅಖಿಲ ಭಾರತ ಸಾರ್ವತ್ರಿಕ ಮುಷ್ಕರ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಯಶಸ್ವಿಯಾಗಿ ನಡೆಯಿತು.

<><><>

ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ೨೦೧೬ರ ಬ್ಯಾಚ್ ನ ಐಎಎಸ್ ಅಧಿಕಾರಿ ಡಾ.ಆನಂದ ಕೆ ವಿಜಯಪುರ ಜಿಲ್ಲೆಯ ನೂತನ ಜಿಲ್ಲಾಧಿಕಾರಿಯಾಗಿ ಅಧಿಕಾರ ಸ್ವೀಕರಿಸಿದ್ದಾರೆ. ವಿಜಯಪುರ ನಿರ್ಗಮಿತ ಜಿಲ್ಲಾಧಿಕಾರಿ ಟಿ.ಭೂಬಾಲನ್ ನೂತನ ಜಿಲ್ಲಾಧಿಕಾರಿಗೆ ಅಧಿಕಾರ ಹಸ್ತಾಂತರಿಸಿದರು.

<><><>

ಸರ್ಕಾರ ಶಾಲಾ ಮಕ್ಕಳಿಗೆ ಶೂ, ಸಾಕ್ಸ್ ನೀಡಿಲ್ಲ. ಪ್ರತಿದಿನ ಮೊಟ್ಟೆ ನೀಡುತ್ತಿಲ್ಲ ಎಂದು ಮಾಜಿ ಸಚಿವ ಶ್ರೀರಾಮುಲು ಆರೋಪಿಸಿದ್ದಾರೆ. ಬಳ್ಳಾರಿಯಲ್ಲಿಂದು ಮಾತನಾಡಿದ ಅವರು, ಉದ್ಯೋಗ ಖಾತ್ರಿ ಯೋಜನೆಯ ಕಾರ್ಮಿಕರಿಗೆ ಆರು ತಿಂಗಳಿಂದ ಕೂಲಿ ನೀಡಿಲ್ಲ ಎಂದು ದೂರಿದ್ದಾರೆ. ಪಾಲಿಕೆಯ ನೌಕರರಿಗೆ ವೇತನ ನೀಡಲಾಗಿಲ್ಲ ಎಂದು ಹೇಳಿದ್ದಾರೆ. ಇದೇ ವೇಳೆ ಬಿಜೆಪಿ ರಾಜ್ಯಾಧ್ಯಕ್ಷರಾಗಿ ಬಹುತೇಕ ವಿಜಯೇಂದ್ರ ಮುಂದುವರೆಯಲಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಯಿಂದ ಬಡ ಜನರ ಜೀವನಮಟ್ಟ ಸುಧಾರಣೆ ಕಂಡಿದ್ದು, ಅದರಲ್ಲೂ ಗೃಹಲಕ್ಷ್ಮಿ ಹಾಗೂ ಶಕ್ತಿಯೋಜನೆಯಿಂದ ಗೃಹಿಣಿಯರು ಆರ್ಥಿಕವಾಗಿ ಸದೃಢರಾಗಲು ಸಹಕಾರಿಯಾಗಿದೆ ಎಂದು ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಮಂಡ್ಯ ಜಿಲ್ಲಾಧ್ಯಕ್ಷರಾದ ಚಿಕ್ಕಲಿಂಗಯ್ಯ ಅಭಿಪ್ರಾಯ ಪಟ್ಟಿದ್ದಾರೆ. ಮಂಡ್ಯದಲ್ಲಿ ನಡೆದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗೃಹಲಕ್ಷ್ಮೀ ಯೋಜನೆಯಿಂದ ಕೂಲಿ, ಕಾರ್ಮಿಕರು ಹಾಗೂ ಬಡವರಿಗೆ ಅನುಕೂಲವಾಗುತ್ತಿದ್ದು, ಬಾಕಿಯಿರುವ ಫೆಬ್ರವರಿ ಹಾಗೂ ಮಾರ್ಚ್ ಮಾಹೆಯ ಹಣವನ್ನು ಫಲಾನುಭವಿಗಳಿಗೆ ಒದಗಿಸಲು ಕ್ರಮಕೈಗೊಳ್ಳುವಂತೆ ಸೂಚಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>